# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 711

ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್
(ನಾಮ ನಿರ್ದೇಶನ ಹೊಂದಿದವರು)

ಉತ್ತರಿಸುವ ದಿನಾಂಕ : 20-12-2021

ಉತ್ತರಿಸು ಸಚಿವರು : ಕೃಷಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಕೃಷಿಕರ ಮಕ್ಕಳ ಉನ್ನತ ಶಿಕ್ಷಣ ಪಡೆಯಲು ವಿದ್ಯಾರ್ಥಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆಯೇ: | ಹೌದು. |
| ಆ. | ವಿದ್ಯಾನಿಧಿ ಯೋಜನೆ ಯಾವ ಇಲಾಖೆ ಮುಖಾಂತರ ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಯಿಂದ ಎಷ್ಟು ವಿದ್ಯಾರ್ಥಿಗಳಿಗೆ ಹಣ ಬಿಡುಗಡೆ ಆಗಿದೆ. ಯೋಜನೆಯ ಅಡೆತಡೆಗಳೇನು? (ಸಂಪೂರ್ಣ ವಿವರ ನೀಡುವುದು) | 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು, ಕೃಷಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿದೆ.<br>ಈ ಯೋಜನೆಗೆ ವಾರ್ಷಿಕವಾಗಿ ರೂ.1000.00 ಕೋಟಿ ಅನುದಾನವನ್ನು ನಿಗದಿಪಡಿಸಲಾಗಿರುತ್ತದೆ. ಇದುವರೆವಿಗೂ ರೂ.125 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, 203638 ಮಕ್ಕಳಿಗೆ ವಿದ್ಯಾರ್ಥಿ ವೇತನ ವರ್ಗಾವಣೆ ಮಾಡಲಾಗಿದೆ.<br>ಎಸ್.ಎಸ್.ಎಲ್.ಸಿ ಅಥವಾ 10 ನೇ ತರಗತಿಯ ನಂತರ, ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿರುವ ಅಧಿಕೃತವಾಗಿ ನೋಂದಣಿಯಾಗಿರುವ ಶಿಕ್ಷಣಸಂಸ್ಥೆ/ವಿಶ್ವವಿದ್ಯಾನಿಲಯಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳವರೆಗೆ ಪ್ರವೇಶವನ್ನು ಪಡೆದಿರುವ ಕರ್ನಾಟಕ ರಾಜ್ಯದ ರೈತರ ಎಲ್ಲಾ ಮಕ್ಕಳ ಬ್ಯಾಂಕ್‌ಗಳ ಖಾತೆಗಳಿಗೆ ನೇರ ನಗದು ವರ್ಗಾವಣೆ (Direct benefit Transfer-DBT) ಪದ್ಧತಿಯ ಮೂಲಕ 2021-22ನೇ ಆರ್ಥಿಕ ವರ್ಷದ ಸಾಲಿನಿಂದ ಜಾರಿಗೆ ಬರುವಂತೆ, ಶಿಷ್ಯ ವೇತನದ ಹಣದ ಮೊತ್ತವನ್ನು ವರ್ಗಾಯಿಸಲಾಗುವುದು. |

| | | |
|---|---|---|
| | | ರೈತ ಕುಟುಂಬದ ಎಲ್ಲಾ ಮಕ್ಕಳು 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುತ್ತಾರೆ. ಸದರಿ ಉದ್ದೇಶಕ್ಕೆ ರೈತ ಕುಟುಂಬ ಎಂದರೆ ರಾಜ್ಯದ ಇ-ಆಡಳಿತ ಇಲಾಖೆಯು ನಿರ್ವಹಿಸುತ್ತಿರುವ "ಕುಟುಂಬ" ತಂತ್ರಾಂಶದ ದತ್ತಾಂಶದಲ್ಲಿ ದಾಖಲಾಗಿರುವ ಸದಸ್ಯರು.<br>ವಿದ್ಯಾರ್ಥಿಯು ಇತರೆ ಯಾವುದೇ ವಿದ್ಯಾರ್ಥಿ ವೇತನ ಪಡೆಯುತ್ತಿದ್ದರೂ 'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿವೇತನ ಪಡೆಯಲು ಅರ್ಹರಾಗುತ್ತಾರೆ.<br>'ಮುಖ್ಯಮಂತ್ರಿ ರೈತ ವಿದ್ಯಾನಿಧಿ' ವಿದ್ಯಾರ್ಥಿ ವೇತನವನ್ನು ವಿತರಿಸುವ ಉದ್ದೇಶಕ್ಕೆ. ರಾಜ್ಯದ ವಿವಿಧ ಇಲಾಖೆಗಳು ನಿರ್ವಹಿಸುತ್ತಿರುವ ಶೈಕ್ಷಣಿಕ ಹಾಗೂ ಇತರೆ ದತ್ತಾಂಶದ ಆಧಾರದ ಮೇಲೆ ಅರ್ಹ ಫಲಾನುಭವಿಗಳನ್ನು ಗುರುತಿಸಿ (on entitlement basis) ವಿದ್ಯಾರ್ಥಿ ವೇತನವನ್ನು ವಿತರಿಸುವುದು ಹಾಗೂ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಿದಲ್ಲಿ, ಅಂತಹ ಪ್ರಕರಣಗಳನ್ನು ಸಹ ಪರಿಗಣಿಸಿ ಅರ್ಹರಿಗೆ ವಿದ್ಯಾರ್ಥಿ |
| | | ವೇತನವನ್ನು ನೇರ ನಗದು ವರ್ಗಾವಣೆ (Direct benefit transfer) ಮೂಲಕ ವರ್ಗಾಯಿಸಲಾಗುವುದು. |

ಸಂಖ್ಯೆ:AGRI-AML/271/2021

(ಬಿ.ಸಿ. ಪಾಟೀಲ್)

ಬಿ.ಸಿ. ಪಾಟೀಲ್

ಕೃಷಿ ಸಚಿವರು